# ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:46:ಗ್ರಾವಿಯೋ:2015

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 29.04.2016

## ಸುತ್ತೋಲೆ

**ವಿಷಯ :** ಗ್ರಾಮ ವಿಕಾಸ ಯೋಜನೆಯಲ್ಲಿ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡಲಾದ ಅನುದಾನವನ್ನು ಕೆ.ಆರ್.ಐ.ಡಿ.ಎಲ್. ಸಂಸ್ಥೆಗೆ ಬಿಡುಗಡೆ ಮಾಡುವ ಕುರಿತು.

**ಉಲ್ಲೇಖ :** ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿ.ಪಂ ಹಾವೇರಿ ಇವರ ಪತ್ರ ದಿನಾಂಕ 16.04.2016.

* * *

ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆಯಾದ ಗ್ರಾಮಗಳ ಅನುದಾನವನ್ನು ಗ್ರಾಮ ಪಂಚಾಯಿತಿಯ ಮೂಲಕ ಕೆ.ಆರ್.ಐ.ಡಿ.ಎಲ್. ಸಂಸ್ಥೆಗೆ ಸುವರ್ಣ ಗ್ರಾಮೋದಯ ಯೋಜನೆಗೆ ಜಿ.ಪಂ.ಗಳು ಬಿಡುಗಡೆ ಮಾಡಿದ ರೀತಿಯಲ್ಲಿಯೇ ಗ್ರಾಮ ಪಂಚಾಯಿತಿಗಳು ಸಹ ಗ್ರಾಮ ವಿಕಾಸ ಯೋಜನೆಯ ಅನುದಾನವನ್ನು ಬಿಡುಗಡೆ ಮಾಡಲು ಉಲ್ಲೇಖ (1) ರಲ್ಲಿ ಅನುಮೋದನೆಯನ್ನು ಕೋರಲಾಗಿದೆ.

ಈ ಹಿಂದೆ ಸುವರ್ಣ ಗ್ರಾಮೋದಯ ಯೋಜನೆಯ ಮಾರ್ಗಸೂಚಿಯಲ್ಲಿ ಜಿ.ಪಂ.ಗಳು ಸುವರ್ಣ ಗ್ರಾಮೋದಯ ಯೋಜನೆಯ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಕೆ.ಆರ್.ಐ.ಡಿ.ಎಲ್. ಸಂಸ್ಥೆಯನ್ನು ಆಯ್ಕೆ ಮಾಡಿಕೊಂಡ ಸಂದರ್ಭದಲ್ಲಿ ಸರ್ಕಾರದಿಂದ ಯೋಜನೆಗೆ ಜಿ.ಪಂ.ಗಳಿಗೆ ಬಿಡುಗಡೆ ಮಾಡಿದ ಅನುದಾನವನ್ನು ಮುಂಗಡವಾಗಿ ಕೆ.ಆರ್.ಐ.ಡಿ.ಎಲ್. ಸಂಸ್ಥೆಗೆ ಬಿಡುಗಡೆ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.

ಅದೇ ರೀತಿ ಗ್ರಾಮ ವಿಕಾಸ ಯೋಜನೆಯಡಿ ಕಾಮಗಾರಿಗಳನ್ನು ಅನುಷ್ಠಾನಕ್ಕೆ ತರಲು ಗ್ರಾಮ ಪಂಚಾಯಿತಿಯು ಕೆ.ಆರ್.ಐ.ಡಿ.ಎಲ್. ಸಂಸ್ಥೆಯನ್ನು ಆಯ್ಕೆ ಮಾಡಿಕೊಂಡಾಗ ಕಾಮಗಾರಿಗಳನ್ನು ಆರಂಭಿಸಲು ಅನುದಾನವನ್ನು ಕೆ.ಆರ್.ಐ.ಡಿ.ಎಲ್. ಸಂಸ್ಥೆಗೆ ಮುಂಗಡವಾಗಿ ಗ್ರಾಮ ಪಂಚಾಯಿತಿಗಳು ಬಿಡುಗಡೆ ಮಾಡುವ ಅವಕಾಶ ಕಲ್ಪಿಸಿದೆ.

ಸರ್ಕಾರವು ಗ್ರಾಮ ವಿಕಾಸ ಯೋಜನೆಯ ಅನುದಾನವನ್ನು ಜಿಲ್ಲಾ ಪಂಚಾಯತ್‌ಗಳ ಮೂಲಕ ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆ ಮಾಡಿದ ಕೂಡಲೇ ಗ್ರಾಮ ಪಂಚಾಯಿತಿಗಳು ಕೆ.ಆರ್.ಐ.ಡಿ.ಎಲ್. ಸಂಸ್ಥೆಗೆ ಗ್ರಾಮ ವಿಕಾಸ ಯೋಜನೆಯ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಅನುದಾನವನ್ನು ಚೆಕ್ ಮೂಲಕ ಅಥವಾ ಆರ್.ಟಿ.ಜಿ.ಎಸ್. ಮೂಲಕ ಮುಂಗಡವಾಗಿ ಬಿಡುಗಡೆ ಮಾಡುವಂತೆ ಗ್ರಾಮ ಪಂಚಾಯಿತಿಗೆ ಸೂಚಿಸಲು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಇವರಿಗೆ ಅವಕಾಶ ಕಲ್ಪಿಸಿದೆ.

27/4/16

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ ಮತ್ತು
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
ದೂರವಾಣಿ & ಫ್ಯಾಕ್ಸ್ : 080-22372992

**ಪ್ರತಿಯನ್ನು ಕ್ರಮಕ್ಕಾಗಿ.**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.

3. ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು.
4. ಸಂಬಂಧಪಟ್ಟ ಗ್ರಾಮ ಪಂಚಾಯಿತಿಯ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿಯ ಅಧಿಕಾರಿಗಳು.
5. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.
6. ವೈಬ್‌ಸೈಟ್/ಮಾಹಿತಿಕೇಂದ್ರ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ. ಬಹುಮಹಡಿ ಕಟ್ಟಡ. ಬೆಂಗಳೂರು ಇವರಿಗೆ ವೈಬ್‌ಸೈಟ್‌ನಲ್ಲಿ ಅಳವಡಿಸಲು.

**ಪ್ರತಿಯನ್ನು ಮಾಹಿತಿಗಾಗಿ.**

1. ಮಹಾಲೇಖಪಾಲರು (ಆಡಿಟ್-I & II), ಬೆಂಗಳೂರು.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ಗಳ ಆಪ್ತ ಕಾರ್ಯದರ್ಶಿಗಳು, ಗ್ರಾ.ಅ.& ಪಂ.ರಾಜ್ ಇಲಾಖೆ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಆರ್ಥಿಕ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಮತ್ತು ಯೋಜನಾ ಇಲಾಖೆ.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ ಮತ್ತು ಪಂ ರಾಜ್ ಇಲಾಖೆ.
6. ರಕ್ಷ ಕಡತಕ್ಕೆ / ಹೆಚ್ಚುವರಿ ಪ್ರತಿ.

...